ದಿನಾಂಕ: 07.09.2021ರಂದು ಬೆಳಿಗ್ಗೆ 10.30 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ **ಶ್ರೀ ಲಿಂಗಣ್ಣ ಗುಂಡಳ್ಳಿ**, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ [ಪ್ರಭಾರ]
2. ಶ್ರೀ ಶಿವಕುಮಾರಯ್ಯ, ಹಿರಿಯ ಆರೋಗ್ಯ ಪರಿವೀಕ್ಷಕರು
3. ಶ್ರೀ ಹನಿಕೇಶ್, ಕಿರಿಯ ಅಭಿಯಂತರರು
4. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು,
5. ಶ್ರೀ ಹರೀಶ್, ವಾರ್ಡ್ ಮಾರ್ಷಲ್,
6. ಶ್ರೀ ವಿಜಯಕುಮಾರ್, ಸದಸ್ಯರು

ಶ್ರೀ ಪೂಜಾರಪ್ಪ, ಸಹಾಯಕ ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ನೋಡಲ್ ಅಧಿಕಾರಿಗಳು ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಲಾಗಿ, ವಿವಿಧ ಇಲಾಖೆಯಿಂದ ಗೈರು ಹಾಜಾರಾಗಿರುವ ಅಧಿಕಾರಿಗಳು / ನೌಕರರಿಗೆ ಹಾಗೂ ವಾರ್ಡ್ ಸದಸ್ಯರುಗಳಿಗೆ ವಾರ್ಡ್ ಕಮಿಟಿ ಗ್ರೂಪ್ ಮೂಲಕ ಮುಂದಿನ ಸಭೆಗೆ ಪೂರಕ ದಾಖಲಾತಿಗಳೊಂದಿಗೆ ಕಡ್ಡಾಯವಾಗಿ ಹಾಜರಾಗುವಂತೆ ಸರ್ವಾನುಮತರಿಂದ ಚರ್ಚಿಸಿ ಮುಂದಿನ ಸಭೆಗೆ ಹಾಜರಾಗುವಂತೆ ವಾರ್ಡಿನ ಸಹಾಯಕ ಅಭಿಯಂತರರಿಗೆ ಸೂಚಿಸಿದೆ.
2. ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಚರ್ಚಿಸಲಾಗಿ, ವಾರ್ಡ್ ನಂ. 107ರಲ್ಲಿ ಇಲ್ಲಿಯವರೆಗೆ ಕೋವಿಡ್-19 ವಿವರದ ಬಗ್ಗೆ ಹಿರಿಯ ಆರೋಗ್ಯ ಅಧಿಕಾರಿಗಳೊಂದಿಗೆ ಮಾಹಿತಿಯನ್ನು ಪಡೆಯುವ ಸಮಯದಲ್ಲಿ ಇಲ್ಲಿಯವರೆಗೆ ಸಂಖ್ಯೆ 01ರಲ್ಲಿ ಕೋವಿಡ್ ಪ್ರಮಾಣ ಉದ್ಭವಿಸಿದ್ದು, ಅದಕ್ಕೆ ಸಂಬಂಧಿಸಿದ ವ್ಯಾಕ್ಸಿನನ್ನು ಪ್ರತಿ ದಿನ 200 ರ ಪ್ರಮಾಣದಲ್ಲಿ ಹಾಗೂ ಅದಕ್ಕೂ ಹೆಚ್ಚಿನ ಪ್ರಮಾಣದಲ್ಲಿ ಗಂಗಮ್ಮ ತಿಮ್ಮಯ್ಯ ಸಮುಧಾಯ ಭವನದಲ್ಲಿ ಪ್ರತಿ ದಿನ ವ್ಯಾಕ್ಸಿನನ್ನು ವಿತರಣೆ ಮಾಡಲಾಗುತ್ತಿದೆ ಎಂದು ಮಾಹಿತಿಯನ್ನು ನೀಡಿರುತ್ತಾರೆ.
3. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಈ ಹಿಂದೆ ಕಸದ ಸಂಗ್ರಹಣೆ ನಿರ್ವಹಣೆಯನ್ನು ಸರ್ವಿಸ್ ರಸ್ತೆಯಲ್ಲಿ ನಿಗಧಿಪಡಿಸಲಾಗಿದ್ದು, ಮೇಲ್ ಸೇತುವೆ ಕಾಮಗಾರಿಯು ಪ್ರಗತಿಯಲ್ಲಿರುವ ಕಾರಣ ತಾತ್ಕಾಲಿಕವಾಗಿ ಬೇರೆ ಸ್ಥಳಕ್ಕೆ ಸ್ಥಳಾಂತರಿಸಲಾಗಿತ್ತು. ಆದಾಗಿ ಸ್ವಲ್ಪ ದಿನ ನಿತ್ಯದ ಕೆಲಸದಲ್ಲಿ ವ್ಯತ್ಯಾಸ ಕಂಡು ಬಂದಿದ್ದು, ಈ ಎಲ್ಲಾ ನ್ಯೂನತೆಗಳನ್ನು ಮೇಲೆ ಸೇತುವೆ ಕಾಮಗಾರಿಯ ಕೆಲಸ ಮುಗಿದ ನಂತರ ಯಥಾಸ್ಥಿತಿಯಲ್ಲಿ ನಿರ್ವಹಿಸಲಾಗುವುದು. ಎಂಬ ಅಂಶವನ್ನು ಸಭೆಯಲ್ಲಿ ಚರ್ಚಿಸಿದರು.
4.

ಪು.ತಿ.ನೋ.

Scanned by CamScanner

5. ಶಿವನಗರ ಮತ್ತು ಮಹಾಗಣಪತಿನಗರ ಹಾಗೂ ಧೋಬಿಘಾಟ್ ರಸ್ತೆಯಲ್ಲಿ ರಸ್ತೆಗುಂಡಿಗಳು ಹೆ ಸಂಖ್ಯೆಯಲ್ಲಿ ಉಲ್ಬಣಗೊಂಡಿದ್ದು, ಸಾರ್ವಜನಿಕರು ದಿನ ನಿತ್ಯ ಓಡಾಡಲು ತುಂಬಾ ತೊಂದರೆಯಾಗಿದೆ ಎಂದು ಸಭೆಯಲ್ಲಿ ಚರ್ಚಿಸಲಾಯಿತು. ಈಗಾಗಲೇ ಮುಖ್ಯ ಅಭಿಯಂತರರ ಆದೇಶದಂತೆ ರಸ್ತೆ ಗುಂಡಿಗಳನ್ನು ಮುಚ್ಚಲು ಬೇಕಾಗಿರುವ ಸಾಮಾಗ್ರಿಗಳಿಗೆ ಬೇಡಿಕೆ ಪತ್ರವನ್ನು ಸಲ್ಲಿಸಲು ತಿಳಿಸಿರುತ್ತಾರೆ. ಅದರಂತೆ ಸಂಬಂಧಪಟ್ಟ ವಾರ್ಡ್ ಅಭಿಯಂತರರು ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

6. ಬೆಂಗಳೂರು ನೀರು ಮತ್ತು ಒಳಚರಂಡಿ ಮಂಡಳಿಯವರು ಯಾವುದೇ ಸಭೆಗೆ ಹಾಜರಾಗಿರುವುದಿಲ್ಲವೆಂದು ಹಲವು ಭಾರಿ ದೂರವಾಣಿ ಮುಖ್ಯಾಂತರ ಸಂಪರ್ಕಿಸಿದರು ಸಹ ಸಭೆಗೆ ಹಾಜರಾಗಿರುವುದಿಲ್ಲವೆಂದು ಚರ್ಚಿಸುವ ಸಮಯದಲ್ಲಿ ಇಲಾಖಾ ವತಿಯಿಂದ ವಾಟರ್ ಪರಿವೀಕ್ಷಕರು ಹಾಜರಾಗಿದ್ದು, ಕೆಲಸ ಭಾಗಗಳಲ್ಲಿ ಮ್ಯಾನ್ ಹೋಲ್ ಮತ್ತು ನೀರಿಗೆ ಸಂಬಂಧಿಸಿದ ಕೊಳವೆಗಳು ಹೊಡೆದು ಹೋಗಿ ಅಲ್ಲಲ್ಲಿ ನೀರು ಸೋರಿಕೆಯಾಗಿ ಉಪಯೋಗಿಸಲು ಬಹಳ ಸಮಸ್ಯೆಯಾಗಿರುತ್ತದೆ ಎಂದು ಸಭೆಯಲ್ಲಿ ಚರ್ಚಿಸಿದಾಗ ಮುಂದಿನ ದಿನಗಳಲ್ಲಿ ಈ ಎಲ್ಲಾ ನ್ಯೂನತೆಗಳನ್ನು ಸರಿಪಡಿಸುತ್ತೇವೆ ಎಂದು ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು

Scanned by CamScanner